ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ , ಕುಂದಾಪುರ

ಸಿ.ಸಿ. ನಂಬ್ರ: 1255/2016

ಚಾಸಾ: 12 ಪ್ರಾಸಾ:8

ದಿನಾಂಕ: 06.01.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಸುಬ್ಬಣ್ಣ |
| ತಂದೆಯ ಹೆಸರು | : | ಪಂಜು ಬಿ. |
| ವಯಸ್ಸು | : | 60 ವರ್ಷ |
| ಉದ್ಯೋಗ | : | ನಿವೃತ್ತ ಪಿ ಎಸ್ ಐ |
| ವಾಸ ಸ್ಥಳ | : | ಕುಂದಾಪುರ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ನಾನು ದಿ: 08-01-2015 ರಿಂದ 30-11-2017ರವರೆಗೆ ಗಂಗೊಳ್ಳಿ ಪೊಲೀಸ್ ಠಾಣೆಯಲ್ಲಿ ಪಿ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ: 06-07-2015 ರಂದು ಈ ಪ್ರಕರಣದ ಕಡತವನ್ನು ಚಾಸಾ-11 ರವರಿಂದ ಪಡೆದುಕೊಂಡು ತನಿಖೆಯನ್ನು ಮುಂದುವರೆಸಿರುತ್ತೇನೆ. ಆರೋಪಿ ಪತ್ತೆಯ ಬಗ್ಗೆ ಮಾಹಿತಿಯನ್ನು ಕಲೆ ಹಾಕಿ ಆರೋಪಿ ತ್ರಾಸಿ ಜಂಕ್ಷನ್ ಹತ್ತಿರ ಬಸ್ಸಿ ಗಾಗಿ ಕಾಯುತ್ತಿರುವ ಬಗ್ಗೆ ಬಂದ ಮಾಹಿತಿ ಮೇರೆಗೆ ಆತನನ್ನು ವಶಕ್ಕೆ ಪಡೆದು ರಾತ್ರಿ 8-30 ಗಂಟೆಗೆ ಠಾಣೆಗೆ ಹಾಜರಾಗಿ ದಸ್ತಗಿರಿ ನಿಯಮ ಪಾಲಿಸಿ ನಂತರ ಆರೋಪಿ ಪಿರ್ಯಾದುದಾರರಿಗೆ ಅಶ್ಲೀಲ ಚಿತ್ರವನ್ನು ತೋರಿಸಿದ ಮೊಬೈಲ್ ಫೋನನ್ನು ಪಂಚರಾದ ನಾಗರಾಜ ಮತ್ತು ರಮೇಶರವರ ಸಮಕ್ಷಮದಲ್ಲಿ ಪರಿಶೀಲಿಸಿದಾಗ ಸ್ಯಾಮ್ ಸಂಗ್ ಗ್ಯಾಲಕ್ಸಿ ಯಂಗ್ ಜಿ2 ಹಾಗೂ 2 ಸಿಮ್ ನ್ನು ವಶಕ್ಕೆ ಪಡೆದಿರುತ್ತೇನೆ.

ನಂತರ ಘಟನೆಯ ಬಗ್ಗೆ ಆರೋಪಿಯನ್ನು ವಿಚಾರಿಸಿದಾಗ ಈ ಘಟನೆ ನಡೆದಂತಹ ವಾಟ್ಸಪ್ ನಲ್ಲಿ ಇದ್ದಂತಹ ಅಶ್ಲೀಲ ಚಿತ್ರವನ್ನು ಡಿಲೀಟ್ ಮಾಡಿರುವುದಾಗಿ ತಿಳಿಸಿರುತ್ತಾರೆ. ಸದ್ರಿ ಮೊಬೈಲ್ ಸೆಟ್ ನ್ನು ಮುಂದಿನ ಕ್ರಮಕ್ಕಾಗಿ ಒಂದು ಕವರ್ ನಲ್ಲಿ ಹಾಕಿ ಅರಗು ಶೀಲು ಮಾಡಿ ಲೇಬಲ್ ಅಂಟಿಸಿ

ಪಂಚನಾಮೆ ಮೂಲಕ ರಾತ್ರಿ 8-30 ರಿಂದ 9 ಗಂಟೆಯವರೆಗೂ ವಶಕ್ಕೆ ಪಡೆದಿರುತ್ತೇನೆ. ನಂತರ ಆರೋಪಿಯ ಸ್ವ ಇಚ್ಛಾ ಹೇಳಿಕೆಯನ್ನು ಪಡೆದಿರುತ್ತೇನೆ. ನಂತರ ವಶಕ್ಕೆ ಪಡೆದ ಸ್ವತ್ತನ್ನು ಠಾಣಾ ಸ್ವತ್ತು ಪಟ್ಟಿ ನಂಬ್ರ 66/2015ರಲ್ಲಿ ಅಳವಡಿಸಿರುತ್ತೇನೆ.

ಆರೋಪಿಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿ ರಿಮ್ಯಾಂಡ್ ವರದಿಯೊಂದಿಗೆ ನ್ಯಾಯಾಲಯದ ಮುಂದೆ ಹಾಜರುಪಡಿಸಿರುತ್ತೇನೆ. ಇದು ಮಹಿಳೆಯ ಮೇಲೆ ದೌರ್ಜನ್ಯ ಪ್ರಕರಣವಾದ ಕಾರಣ ಪ್ರಕರಣದ ಕಡತವನ್ನು ಮೇಲಾಧಿಕಾರಿಯವರ ಮೂಲಕ ಚಾಸಾ-13 ರವರಿಗೆ ಹಸ್ತಾಂತರಿಸಿರುತ್ತೇನೆ.

ಸಾಕ್ಷಿಯು ಆರೋಪಿ ದಸ್ತಗಿರಿ ಮತ್ತು ಸ್ವತ್ತು ಸ್ವಾಧೀನತಾ ಪಂಚನಾಮೆಗಳಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-9, ಸಾಕ್ಷಿಯ ಸಹಿಯನ್ನು ನಿಪಿ-9(ಎ) ಎಂದು ಗುರುತಿಸಲಾಯಿತು. ಆ ದಿನ ವಶಕ್ಕೆ ಪಡೆದ ಮೊಬೈಲ್ ಫೋನನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಆರ್ ಎಂ ಎಸ್ ರವರಿಂದಃ**

ಠಾಣೆಯಿಂದ ತಕ್ಷೀರು ನಡೆದ ಸ್ಥಳ 2 ಕಿ.ಮೀ ದೂರ ಇರುತ್ತದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಯನ್ನು ದಸ್ತಗಿರಿ ಮಾಡಿಲ್ಲ ಎಂದರೆ ಸರಿಯಲ್ಲ. ಆತನ ಸ್ವ ಇಚ್ಛಾ ಹೇಳಿಕೆಯನ್ನು ಪ್ರಕರಣಕ್ಕೆ ಅನುಗುಣವಾಗಿ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ನಿಪಿ-9ನ್ನು ಪ್ರಕರಣಕ್ಕಾಗಿ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಮೊಬೈಲು ಮತ್ತು ಸಿ.ಡಿಯನ್ನು ಪ್ರಕರಣಕ್ಕಾಗಿ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದ ಯಾವುದೇ ತನಿಖೆ ಕೈಗೊಂಡಿಲ್ಲದೆ ದಾಖಲೆಗಳನ್ನು ಠಾಣೆಯಲ್ಲಿ ತಯಾರಿಸಿರುತ್ತೇನೆ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ಹೇಳಿದ ಎಲ್ಲಾ ವಿಚಾರಗಳು ಸುಳ್ಳು ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ . ದಂ. ಕುಂದಾಪುರ**